ನೋಂದಾಯಿತ ಕಾರ್ಮಿಕರ ವಿವರ

3195 (4058); ಶ್ರೀ ಪಾಟೀಲ್ ಜೆ.ಟಿ. (ಬೀಳಗಿ)

ಅ) ಬಾಗಲಕೋಟೆ ಜಿಲ್ಲೆಯಲ್ಲಿ ಎಷ್ಟು ಜನ ನೋಂದಾಯಿತ ಕಾರ್ಮಿಕರಿದ್ದಾರೆ (ವಿವರ ನೀಡುವುದು);

ಆ) ನೋಂದಾಯಿತ ಕಾರ್ಮಿಕರಿಗೆ ಸರ್ಕಾರದಿಂದ ಸಿಗುವ ಸೌಲಭ್ಯಗಳೇನು;

ಇ) ನೋಂದಾಯಿತ ಕಾರ್ಮಿಕರಿಗೆ ಆರೋಗ್ಯ ಕಾಪಾಡಿಕೊಳ್ಳಲು ಸರ್ಕಾರದಿಂದ ಯಾವ ಯಾವ ಕ್ರಮ ಕೈಗೊಳ್ಳಲಾಗಿದೆ (ವಿವರ ನೀಡುವುದು)

ಈ) ನೋಂದಾಯಿಸದೇ ಇದ್ದ ಅಟೋರಿಕ್ಷಾ, ಟ್ಯಾಕ್ಸಿ, ಟಾಂಗಾವಾಲಗಳು, ಗ್ರಾಮಗಳಲ್ಲಿಯ ಸಂಘಟಿತ ಕರ್ಮಚಾರಿಗಳ ಆರೋಗ್ಯದ ಬಗ್ಗೆ ಕೈಗೊಂಡಿರುವ ಕ್ರಮಗಳೇನು; ಎಷ್ಟು ಪ್ರಮಾಣದಲ್ಲಿ ಈ ಲಾಭವನ್ನು ಕಾರ್ಮಿಕರು ಪಡೆದಿದ್ದಾರೆ.

ಉ) ಸರ್ಕಾರದ ಲಾಭವನ್ನು ಬಾಗಲಕೋಟೆ ಜಿಲ್ಲೆಯ ಕಾರ್ಮಿಕರು ಪಡೆದುಕೊಂಡಿದ್ದಾರೆಯೇ (ಮಾಹಿತಿ ನೀಡುವುದು);

ಊ) ಈ ಕಾರ್ಯಕ್ರಮಗಳ ಪ್ರಚಾರಕ್ಕಾಗಿ ಕಾರ್ಮಿಕ ಇಲಾಖೆಯ ಅಧಿಕಾರಿಗಳು ಕೈಗೊಂಡ ಕ್ರಮವೇನು?

ಶ್ರೀ ಪಿ.ಟಿ. ಪರಮೇಶ್ವರ ನಾಯ್ಕ (ಮಾನ್ಯ ಕಾರ್ಮಿಕ ರಾಜ್ಯ ಸಚಿವರು)

ಅ) ಇಲಾಖೆಯಲ್ಲಿ ರಾಜ್ಯದಲ್ಲಿನ ಎಲ್ಲಾ ಕಾರ್ಮಿಕರನ್ನು ನೋಂದಣಿ ಮಾಡುವ ವ್ಯವಸ್ಥೆ ಇರುವುದಿಲ್ಲ. ಆದರೆ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ಕಾರ್ಮಿಕ ಕಲ್ಯಾಣ ಯೋಜನೆಗಳಡಿಯಲ್ಲಿ ಕಾರ್ಮಿಕರನ್ನು/ಫಲಾನುಭವಿಗಳನ್ನು ನೋಂದಣಿ ಮಾಡಲಾಗುತ್ತಿದೆ. ಬಾಗಲಕೋಟೆ ಜಿಲ್ಲೆಯಲ್ಲಿ ವಿವಿಧ ಕಲ್ಯಾಣ ಯೋಜನೆಗಳಡಿಯಲ್ಲಿ ನೋಂದಾಯಿಸಲಾಗಿರುವ ಸಂಖ್ಯೆ ಈ ಮುಂದಿನಂತೆ ಇದೆ.

1. ಎನ್‌ಪಿಎಸ್ ಲೈಟ್– ಸ್ವಾವಲಂಬನ್ ಯೋಜನೆಯಡಿ ಇಲ್ಲಿಯವರೆಗೆ ಒಟ್ಟು 455 ವಂತಿಕೆದಾರರು ನೋಂದಣಿಯಾಗಿರುತ್ತಾರೆ.

2. ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ವಾಹನ ಚಾಲಕರ ಅಪಘಾತ ಪರಿಹಾರ ಯೋಜನೆಯಡಿ ಇಲ್ಲಿಯವರೆಗೆ ಒಟ್ಟು 2,908 ಚಾಲಕರು ನೋಂದಣಿಯಾಗಿರುತ್ತಾರೆ.

3. ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಗೆ ಫಲಾನುಭವಿಗಳಾಗಿ 12,199 ಕಟ್ಟಡ ಕಾರ್ಮಿಕರನ್ನು ನೋಂದಣಿ ಮಾಡಲಾಗಿದೆ.

4. ರಾಷ್ಟ್ರೀಯ ಸ್ವಾಸ್ಥ ಬಿಮಾ ಯೋಜನೆಯಡಿ ಇದುವರೆಗೆ 3,85,019 ಕುಟುಂಬಗಳಿಗೆ ಸ್ಮಾರ್ಟ್ ಕಾರ್ಡ್‌ಗಳನ್ನು ವಿತರಿಸಲಾಗಿದೆ.

ಆ)

I. ಅಸಂಘಟಿತ ಕಾರ್ಮಿಕರ ಕಲ್ಯಾಣ ಮತ್ತು ಸಾಮಾಜಿಕ ಭದ್ರತೆಗಾಗಿ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಈ ಕೆಳಗಿನ 2 ಯೋಜನೆಗಳನ್ನು ಅನುಷ್ಠಾನ ಮಾಡುತ್ತಿದೆ.

1. ಎನ್.ಪಿ.ಎಸ್. ಲೈಟ್–ಸ್ವಾವಲಂಭನ್ ಪಿಂಚಣಿ ಯೋಜನೆ:–
ಈ ಯೋಜನೆಯನ್ವಯ ವಾರ್ಷಿಕ ಕನಿಷ್ಠ ₹ 1,000/–ಗಳನ್ನು ಪಾವತಿಸುವ ವಂತಿಕೆದಾರರು ಕೇಂದ್ರ ಸರ್ಕಾರದಿಂದ ವಾರ್ಷಿಕ ಗರಿಷ್ಠ ₹ 1,000/– ವಂತಿಕೆಯನ್ನು ಮತ್ತು ರಾಜ್ಯ ಸರ್ಕಾರದಿಂದ ವಾರ್ಷಿಕ ಗರಿಷ್ಠ ₹ 1,200/–ಗಳ ಸಮಾನಾಂತರ ವಂತಿಕೆಯನ್ನು ಪಡೆಯಲು ಅರ್ಹರಿರುತ್ತಾರೆ ಹಾಗೂ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಂತಿಕೆದಾರರು ಅವರು ಪಾವತಿಸುವ ವಂತಿಕೆಯ ಎರಡರಷ್ಟು ಅಂದರೆ ಗರಿಷ್ಠ ₹ 2,400/– ರ ಮಿತಿಗೊಳಪಟ್ಟು, ಸಮಾನಾಂತರ ವಂತಿಕೆಯನ್ನು (Matching Contribution) ರಾಜ್ಯ ಸರ್ಕಾರದಿಂದ ಪಡೆಯಲು ಅರ್ಹರಿರುತ್ತಾರೆ. ಫಲಾನುಭವಿಯು 60

ವರ್ಷ ಪೂರೈಸಿದಾಗ ಆತನ ಪ್ರಾನ್ (PRAN) ಖಾತೆಯಲ್ಲಿ ಸಂಗ್ರಹವಾದ ಒಟ್ಟು ಮೊತ್ತದ ಶೇ.60 ಅನ್ನು ನಗದು ರೂಪದಲ್ಲಿ ಪಡೆಯಬಹುದಾಗಿದ್ದು, ಉಳಿದ ಶೇ.40 ಮೊತ್ತಕ್ಕೆ ಮಾಸಿಕ ಪಿಂಚಣಿಯನ್ನು ಪಡೆಯಬಹುದಾಗಿದ್ದು, ಉಳಿದ ಶೇ.40 ಮೊತ್ತಕ್ಕೆ ಮಾಸಿಕ ಪಿಂಚಣಿಯನ್ನು ಪಡೆಯಬಹುದಾಗಿದೆ. ವಂತಿಕೆದಾರನು/ಳು ಇಚ್ಛಿಸಿದ್ದಲ್ಲಿ ಸಂಗ್ರಹವಾಗುವ ಸಂಪೂರ್ಣ ಮೊತ್ತದ ಮೇಲೆ ಪಿಂಚಣಿಯನ್ನು ಪಡೆಯಬಹುದಾಗಿದೆ.

2. ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ವಾಹನ ಚಾಲಕರ ಅಪಘಾತ ಪರಿಹಾರ ಯೋಜನೆ:–

ಈ ಯೋಜನೆಯನ್ವಯ ಆಟೋ ರಿಕ್ಷಾ, ಟ್ಯಾಕ್ಸಿ, ಮ್ಯಾಕ್ಸಿಕ್ಯಾಬ್, ಲಾರಿ ಮತ್ತು ಬಸ್‌ಗಳ ನೋಂದಾಯಿತ ಚಾಲಕರು ಕರ್ತವ್ಯದಲ್ಲಿರುವಾಗ ಅಥವಾ ಕರ್ತವ್ಯದಲ್ಲಿಲ್ಲದಿರುವಾಗ ಅಪಘಾತಕ್ಕೀಡಾಗಿ ಮರಣ ಹೊಂದಿದಲ್ಲಿ ನಾಮನಿರ್ದೇಶಿತರಿಗೆ 2 ಲಕ್ಷ ರೂ ಪರಿಹಾರ ಅಥವಾ ಶಾಶ್ವತ ದುರ್ಬಲತೆಗೊಂಡಲ್ಲಿ ದುರ್ಬಲತೆಯ ಪ್ರಮಾಣಕ್ಕನುಗುಣವಾಗಿ ₹ 2 ಲಕ್ಷ ರೂ.ವರೆಗೆ ಪರಿಹಾರ ಪಡೆಯಬಹುದಾಗಿರುತ್ತದೆ.

ಹಾಗೆಯೇ ನೋಂದಾಯಿತ ಚಾಲಕರು ಅಪಘಾತಕೊಳ್ಳಗಾಗಿ ಆಸ್ಪತ್ರೆಯಲ್ಲಿ 15 ದಿನಗಳಿಗಿಂತ ಕಡಿಮೆ ಅವಧಿಗೆ ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ಒಟ್ಟು ವಿಮಾ ಮೊತ್ತದಲ್ಲಿ ಶೇಕಡ 25 ರಷ್ಟು ಅಂದರೆ ಗರಿಷ್ಠ ₹ 50,000/–ರವರೆಗೆ ಅಥವಾ ವಾಸ್ತವಿಕ ಚಿಕಿತ್ಸಾ ವೆಚ್ಚ ಇವೆರಡರಲ್ಲಿ ಯಾವುದು ಕಡಿಮೆಯೋ ಆ ಮೊತ್ತ ಮತ್ತು ಚಾಲಕರು 15 ದಿನಗಳಿಗಿಂತ ಹೆಚ್ಚು ದಿನ ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ಒಟ್ಟು ವಿಮಾ ಮೊತ್ತದಲ್ಲಿ ಶೇಕಡ 50 ರಷ್ಟು ಅಂದರೆ ಗರಿಷ್ಠ ₹ 1 ಲಕ್ಷದ ವರೆಗೆ ಅಥವಾ ನಿಜವಾಗಿ ತಗಲುವ ಆಸ್ಪತ್ರೆ ವೆಚ್ಚ, ಇವುಗಳಲ್ಲಿ ಯಾವುದು ಕಡಿಮೆಯೋ ಆ ಮೊತ್ತವನ್ನು ಪಡೆಯಬಹುದಾಗಿರುತ್ತದೆ.

II. ರಾಷ್ಟ್ರೀಯ ಸ್ವಾಸ್ಥ್ಯ ಬಿಮಾ ಯೋಜನೆಯಡಿಯಲ್ಲಿ ಸ್ಮಾರ್ಟ್ ಕಾರ್ಡ್ ಹೊಂದಿರುವ ಪ್ರತಿ ಕುಟುಂಬದ 5 ಜನ ಸದಸ್ಯರು ಗುರುತಿಸಲಾದ 1,516 ಚಿಕಿತ್ಸಾ ಕ್ರಮಗಳಿಗೆ ನೋಂದಾಯಿತ ಆಸ್ಪತ್ರೆಗಳಲ್ಲಿ ವಾರ್ಷಿಕ ₹ 30,000/– ದವರೆಗಿನ ಒಳರೋಗಿ ಚಿಕಿತ್ಸಾ ವೆಚ್ಚವನ್ನು ಉಚಿತವಾಗಿ ಪಡೆದುಕೊಳ್ಳ ಬಹುದಾಗಿರುತ್ತದೆ. ವಿಮಾ ಅವಧಿಯಲ್ಲಿ ಜನಿಸಿದ ನವಜಾತ ಶಿಶುಗಳು ಕೂಡ ಈ ಉಚಿತ ಒಳರೋಗಿ ಚಿಕಿತ್ಸೆಯನ್ನು ಪಡೆಯಬಹುದಾಗಿರುತ್ತದೆ.

III. ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯು ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಲ್ಲಿ ಕೆಲಸ ಮಾಡುತ್ತಿರುವ ಅಸಂಘಟಿತ ಕಾರ್ಮಿಕರನ್ನು ಮಂಡಳಿಯ ಫಲಾನುಭವಿಗಳನ್ನಾಗಿ ನೋಂದಾಯಿಸಿಕೊಂಡು ಅವರುಗಳಿಗೆ ಈ ಕೆಳಕಂಡ ಸೌಲಭ್ಯಗಳನ್ನು ನೀಡುತ್ತಿದೆ.

ನೋಂದಾಯಿಸಿದ ತಕ್ಷಣ ದೊರೆಯುವ ಸೌಲಭ್ಯಗಳು:

1. ಒಳರೋಗಿ ಧನಸಹಾಯ
2. ಅಪಘಾತ/ದುರ್ಬಲತೆ ಪರಿಹಾರ
3. ಪ್ರಮುಖ ಖಾಯಿಲೆಗಳ ಧನಸಹಾಯ
4. ನೋಂದಯಿತರಲ್ಲದ ಕಾರ್ಮಿಕರಿಗೆ ಅನುಗ್ರಹರಾಶಿ ಪರಿಹಾರ
5. ಅಂತ್ಯ ಕ್ರಿಯೆಗಾಗಿ ಧನಸಹಾಯ & ಅನುಗ್ರಹರಾಶಿ ಪರಿಹಾರ ಧನಸಹಾಯ
6. ದುರ್ಬಲತೆ ಮಾಸಿಕ ಪಿಂಚಣಿ

ನೊಂದಾಯಿಸಿ ಒಂದು ವರ್ಷ ಪೂರ್ಣಗೊಳಿಸಿದವರಿಗೆ ದೊರೆಯುವ ಸೌಲಭ್ಯಗಳು:

7. ಹೆರಿಗೆ ಧನಸಹಾಯ
8. ಶೈಕ್ಷಣಿಕ ಧನಸಹಾಯ
9. ಮದುವೆ ಧನಸಹಾಯ

ನೋಂದಾಯಿಸಿ ಎರಡು ವರ್ಷ ಪೂರ್ಣಗೊಳಿಸಿದವರಿಗೆ ದೊರೆಯುವ ಸೌಲಭ್ಯ

10. ಉಪಕರಣ ಧನಸಹಾಯ.

ನೋಂದಾಯಿಸಿ ಐದು ವರ್ಷ ಪೂರ್ಣಗೊಳಿಸಿದವರಿಗೆ ದೊರೆಯುವ ಸೌಲಭ್ಯ

11. ಮಾಸಿಕ ಪಿಂಚಣಿ ಸೌಲಭ್ಯ

12. ಮನೆ ಕಟ್ಟುವುದಕ್ಕೆ ಧನಸಹಾಯ

ಇ) ನೋದಾಯಿತ ಕಾರ್ಮಿಕರ ಆರೋಗ್ಯ ರಕ್ಷಣೆಗಾಗಿ ಇಲಾಖೆ ಅನುಷ್ಠಾನಗೊಳಿಸುತ್ತಿರುವ ಕಲ್ಯಾಣ ಯೋಜನೆಗಳಡಿಯಲ್ಲಿ ಲಭ್ಯವಿರುವ ಸೌಲಭ್ಯಗಳು ಈ ಮುಂದಿನಂತಿವೆ:

1. ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ವಾಹನ ಚಾಲಕರ ಅಪಘಾತ ಪರಿಹಾರ ಯೋಜನೆಯಡಿ ನೋಂದಾಯಿತ ಚಾಲಕರು ಅಪಘಾತಕ್ಕೊಳಗಾಗಿ ಆಸ್ಪತ್ರೆಯಲ್ಲಿ 15 ದಿನಗಳಿಗಿಂತ ಕಡಿಮೆ ಅವಧಿಗೆ ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ಒಟ್ಟು ವಿಮಾ ಮೊತ್ತದಲ್ಲಿ ಶೇಕಡ 25 ರಷ್ಟು ಅಂದರೆ ಗರಿಷ್ಠ ₹ 50,000/– ದವರೆಗೆ ಅಥವಾ ವಾಸ್ತವಿಕ ಚಿಕಿತ್ಸಾ ವೆಚ್ಚ ಇವರೆಡರಲ್ಲಿ ಯಾವುದು ಕಡಿಮೆಯೋ ಆ ಮೊತ್ತ ಮತ್ತು 15 ದಿನಗಳಿಗಿಂತ ಹೆಚ್ಚು ದಿನ ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ಒಟ್ಟು ವಿಮಾ ಮೊತ್ತದಲ್ಲಿ ಶೇಕಡ 50 ರಷ್ಟು ಅಂದರೆ ಗರಿಷ್ಠ ₹ 1 ಲಕ್ಷದವರೆಗೆ ಅಥವಾ ವಾಸ್ತವಿಕ ಆಸ್ಪತ್ರೆ ವೆಚ್ಚ, ಇವುಗಳಲ್ಲಿ ಯಾವುದು ಕಡಿಮೆಯೋ ಆ ಮೊತ್ತ ದೊರೆಯುತ್ತದೆ.

2. ರಾಷ್ಟ್ರೀಯ ಸ್ವಾಸ್ಥ್ಯ ಬಿಮಾ ಯೋಜನೆಯಡಿಯಲ್ಲಿ ಸ್ಮಾರ್ಟ್ ಕಾರ್ಡ್ ಹೊಂದಿರುವ ಪ್ರತಿ ಕುಟುಂಬದ ಗರಿಷ್ಠ 5 ಜನ ಸದಸ್ಯರು ಶಸ್ತ್ರಚಿಕಿತ್ಸೆ ಸೇರಿದಂತೆ 1,516 ಚಿಕಿತ್ಸಾ ಕ್ರಮಗಳಿಗೆ ಉಚಿತ ಒಳರೋಗಿ ಚಿಕಿತ್ಸೆಯನ್ನು ಪಡೆಯಬಹುದಾಗಿರುತ್ತದೆ. ಈ ಯೋಜನೆಯಡಿ ಈಗಾಗಲೇ ಅಸ್ತಿತ್ವದಲ್ಲಿರುವ ಎಲ್ಲಾ ಖಾಯಿಲೆಗಳಿಗೆ ಒಳರೋಗಿ ಚಿಕಿತ್ಸಾ ವೆಚ್ಚ, ಹೆರಿಗೆ

ಚಿಕಿತ್ಸಾ ವೆಚ್ಚ ಹಾಗೂ ವಿಮಾ ಅವಧಿಯಲ್ಲಿ ಜನಿಸುವ ಶಿಶುಗಳಿಗೂ ಸಹ ಉಚಿತ ಒಳರೋಗಿ ಚಿಕಿತ್ಸಾ ಸೌಲಭ್ಯವನ್ನು ವಾರ್ಷಿಕ ₹ 30,000/–ಗಳ ಮಿತಿಗೊಳಪಟ್ಟಂತೆ ಪಡೆದುಕೊಳ್ಳ ಬಹುದಾಗಿರುತ್ತದೆ. ಈ ಒಳರೋಗಿ ಚಿಕಿತ್ಸೆಯನ್ನು ಈ ಯೋಜನೆಯಡಿ ನೋಂದಾಯಿತವಾಗಿರುವ ದೇಶದಾದ್ಯಂತ ಇರುವ ಯಾವುದೇ ಆಸ್ಪತ್ರೆಗಳಲ್ಲಿ ಪಡೆಯಬಹುದಾಗಿರುತ್ತದೆ.

3. ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕ ಕಲ್ಯಾಣ ಮಂಡಳಿಯ ವತಿಯಿಂದ ನೋಂದಾಯಿತ ಕಟ್ಟಡ ಕಾರ್ಮಿಕರು ಸರ್ಕಾರಿ/ಅನುಮೋದಿತ ಆಸ್ಪತ್ರೆಗಳಲ್ಲಿ ಒಳರೋಗಿ ಚಿಕಿತ್ಸೆಯನ್ನು ಪಡೆದುಕೊಳ್ಳುವುದಕ್ಕೆ ₹ 400/– ರಿಂದ ₹ 6,000/– ವರೆಗೆ ಧನ ಸಹಾಯವನ್ನು ಪಡೆದುಕೊಳ್ಳಬಹುದಾಗಿರುತ್ತದೆ. ಹಾಗೆಯೇ ಪ್ರಮುಖ ಖಾಯಿಲೆಗಳಾದ ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಶಸ್ತ್ರಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮಾ ಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರಪಿಂಡದಲ್ಲಿನ ಕಲ್ಲು ತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ, ಇ.ಎನ್.ಟಿ. ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕ್ಯೂಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆ ಮುರಿತ/ಡಿಸ್‌ಲೊಕೇಶನ್ ಚಿಕಿತ್ಸೆ, ಸಾಮಾನ್ಯ ಶಸ್ತ್ರಚಿಕಿತ್ಸೆಗಳಿಗೆ ₹ 2,00,000/– ದವರೆಗೆ ವೈದ್ಯಕೀಯ ಧನಸಹಾಯವನ್ನು ಪಡೆಯಬಹುದಾಗಿರುತ್ತದೆ.

ಈ) ಮೇಲೆ ಹೇಳಿದ ನಾಲ್ಕು ಯೋಜನೆಗಳಡಿ ನೋಂದಣಿಯಾಗದಿರುವ ಕಾರ್ಮಿಕರುಗಳಿಗೆ ಆರೋಗ್ಯ ಸಂಬಂಧಿತ ಸೌಲಭ್ಯಗಳನ್ನು ಒದಗಿಸಲು ಯಾವುದೇ ಯೋಜನೆ ಇಲಾಖೆಯಲ್ಲಿ ಇರುವುದಿಲ್ಲ.

ಉ) ಈ ಮೇಲೆ ಹೇಳಿದ ನಾಲ್ಕು ಯೋಜನೆಗಳಡಿ ನೋಂದಣಿಯಾಗದಿರುವ ಕಾರ್ಮಿಕರ ಆರೋಗ್ಯ ಸಂಬಂಧಿತ ಸೌಲಭ್ಯಗಳನ್ನು ಇಲಾಖೆ ನೀಡುತ್ತಿಲ್ಲವಾದ್ದರಿಂದ ಈ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ.

ಊ)

1. ರಾಷ್ಟ್ರೀಯ ಸ್ವಾಸ್ಥ್ಯ ಬಿಮಾ ಯೋಜನೆಯಡಿ ಫಲಾನುಭವಿಗಳ ಮನೆಮನೆಗಳಿಗೆ ತೆರಳಿ ಸ್ಮಾರ್ಟ್ ಕಾರ್ಡ್ ನೀಡುವ ಸ್ಥಳ ಮತ್ತು ದಿನಾಂಕದ ಬಗ್ಗೆ ಮಾಹಿತಿಯನ್ನು ನೀಡುವುದರ ಮುಖಾಂತರ ಸ್ಮಾರ್ಟ್ ಕಾರ್ಡ್‌ಗಳನ್ನು ವಿತರಿಸಲಾಗುತ್ತಿದೆ. ಹಾಗೆಯೇ ಪ್ರಚಾರಕ್ಕೆ ಕರಪತ್ರ, ಭಿತ್ತಿಪತ್ರ, ಬ್ಯಾನರ್‌ಗಳನ್ನು ಹಾಕುವುದು ಇತ್ಯಾದಿಗಳ ಮೂಲಕ ಪ್ರಚಾರವನ್ನು ನೀಡಲಾಗುತ್ತಿದೆ.
2. ಎನ್‌ಪಿಎಸ್ ಸ್ವಾವಲಂಬನ್ ಪಿಂಚಣಿ ಯೋಜನೆ ಮತ್ತು ಖಾಸಗಿ ವಾಣಿಜ್ಯ ವಾಹನ ಚಾಲಕರ ಅಪಘಾತ ಪರಿಹಾರ ಯೋಜನೆಗಳ ಬಗ್ಗೆ ಅಸಂಘಟಿತ ಕಾರ್ಮಿಕರ ಸಂಘಟನೆಗಳ ಸಭೆಗಳು ಮತ್ತು ಕಾರ್ಯಾಗಾರಗಳನ್ನು ನಡೆಸಿ ತಿಳುವಳಿಕೆ ನೀಡಲಾಗುತ್ತಿದೆ.
3. ಬೃಹತ್ ಕಟ್ಟಡ ಕಾಮಗಾರಿಗಳು ನಡೆಯುವ ಸ್ಥಳಗಳಿಗೆ ಇಲಾಖೆಯ ಅಧಿಕಾರಿಗಳು, ನಿರೀಕ್ಷಕರುಗಳು ತೆರಳಿ ಅಲ್ಲಿನ ಕಾರ್ಮಿಕರಿಗೆ ಲಭ್ಯವಿರುವ ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಿ ಕಾರ್ಮಿಕರ ನೋಂದಣಿಯನ್ನು ಮಾಡಿಸಲಾಗುತ್ತಿದೆ.

ಈ ಎಲ್ಲಾ ಯೋಜನೆಗಳ ಬಗ್ಗೆ ವೃತ್ತಪತ್ರಿಕೆಗಳಲ್ಲಿ ಜಾಹೀರಾತು ನೀಡುವುದು, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಕಾನೂನು ಸೇವಾ ಪ್ರಾಧಿಕಾರದ ಸಹಯೋಗದೊಂದಿಗೆ ಅರಿವು ಕಾರ್ಯಕ್ರಮಗಳನ್ನು ಆಯೋಜಿಸುವುದು, ಇಲಾಖೆಯ ಅಧಿಕಾರಿಗಳು ಸುದ್ದಿಗೋಷ್ಠಿಗಳನ್ನು

ಹಮ್ಮಿಕೊಳ್ಳುವುದು, ಕರಪತ್ರ, ಭಿತ್ತಿಪತ್ರಗಳನ್ನು ಹಂಚುವುದರ ಮೂಲಕ ಯೋಜನೆಗಳ ಬಗ್ಗೆ ವ್ಯಾಪಕ ಪ್ರಚಾರ ಕೈಗೊಳ್ಳಲಾಗಿದೆ.

ಜ–ಎ ವಿತರಣೆ ಕಾಲುವೆ ಯೋಜನೆ

3199 (3036); ಶ್ರೀ ಪ್ರತಾಪಗೌಡ ಪಾಟೀಲ್ (ಮಸ್ಕಿ)

ಅ) ಕೃಷ್ಣಾ ಬಲದಂಡೆ ನಾಲೆಯಿಂದ 5–ಎ ವಿತರಣೆ ಕಾಲುವೆ ಯೋಜನೆಯನ್ನು ಜಾರಿಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಸದರಿ 5–ಎ ಕಾಲುವೆಯ ಯೋಜನೆಯನ್ನು ಜಾರಿಗೊಳಿಸುವ ವ್ಯಾಪ್ತಿಯಲ್ಲಿ ಎಷ್ಟು ಎಕರೆ ಪ್ರದೇಶವು ನೀರಾವರಿ ವ್ಯಾಪ್ತಿಗೆ ಹಾಗೂ ಯಾವ ಯಾವ ತಾಲ್ಲೂಕು ಮತ್ತು ಯಾವ ಯಾವ ಗ್ರಾಮಗಳು ಒಳಪಡುತ್ತವೆ;

ಇ) ಈಗಾಗಲೇ ಈ ಯೋಜನೆಯ ಜಾರಿಗಾಗಿ ರೈತರು ಹೋರಾಟವನ್ನು ಪ್ರಾರಂಭಿಸಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಬಂದಿದ್ದಲ್ಲಿ, ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗಿದೆ (ಸಂಪೂರ್ಣ ವಿವರ ನೀಡುವುದು)?

ಶ್ರೀ ಎಂ.ಬಿ. ಪಾಟೀಲ (ಮಾನ್ಯ ಜಲ ಸಂಪನ್ಮೂಲ ಸಚಿವರು)

ಅ) ಯಿಂದ ಈ) ವರೆಗೆ ನಾರಾಯಣಪೂರ 5–ಎ ವಿತರಣಾ ಕಾಲುವೆ ಯೋಜನೆ ಕುರಿತು ಆ ಭಾಗದ ರೈತರು ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತಕ್ಕೆ ಮನವಿ ಸಲ್ಲಿಸಿರುತ್ತಾರೆ. ರೈತರ ಮನವಿಯನ್ವಯ ನಿಗಮದಲ್ಲಿ, ಪರಿಶೀಲಿಸಲಾಗುತ್ತಿದೆ. ನಾರಾಯಣಪೂರ 5–ಎ ವಿತರಣ ಕಾಲುವೆಗೆ ಯಾವುದೇ ನೀರಿನ ಹಂಚಿಕೆ ಇರುವುದಿಲ್ಲ.